**Akashvani : Bangalore**
**Regional Bulletin In Kannada**
**16.09.2026 / 18.40 hrs**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

ಮುಖ್ಯಾಂಶಗಳು

೧. ಕನ್ನಡದ ಹಿರಿಯ ನಟ ಅನಂತ್‌ನಾಗ್ ಅವರಿಗೆ ಒಲಿದ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ ; ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ಗಣ್ಯರಿಂದ ಅಭಿನಂದನೆ

೨. ರಾಜ್ಯದಲ್ಲಿ ಬರ ಹಿನ್ನೆಲೆ ; ರೈತರ ಬ್ಯಾಂಕ್ ಸಾಲ ಮರುಪಾವತಿಗೆ ವಿನಾಯಿತಿ ಘೋಷಣೆ ; ಬಲವಂತದ ವಸೂಲಿಗೆ ನಿಷೇಧ

೩. ಬಡವರಿಗೆ ನಿವೇಶನ ನೀಡುವ ಯೋಜನೆಯನ್ನು ಗಂಭೀರವಾಗಿ ಪರಿಗಣಿಸುವಂತೆ ಅಧಿಕಾರಿಗಳಿಗೆ ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಸೂಚನೆ

೪. ಕೇಂದ್ರ ಗೃಹ ಸಚಿವ ಅಮಿತ್ ಶಾ ಇದೇ ೧೯ ರಂದು ರಾಜ್ಯ ಪ್ರವಾಸ ; ಹುಬ್ಬಳ್ಳಿಯಲ್ಲಿ ನೂತನ ಖಾಸಗಿ ವೈದ್ಯಕೀಯ ಕಾಲೇಜು ಕಟ್ಟಡ ಹಾಗೂ ಆಸ್ಪತ್ರೆ ಲೋಕಾರ್ಪಣೆ

೫. ಹವಾನಿಯಂತ್ರಿತ ಕೊಠಡಿ ಬಿಟ್ಟು ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವಂತೆ ಅಧಿಕಾರಿಗಳಿಗೆ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ನಿರ್ದೇಶನ

---

ಭಾರತೀಯ ಚಲನಚಿತ್ರರಂಗಕ್ಕೆ ನೀಡಿದ ಕೊಡುಗೆ ಹಾಗೂ ಹಲವು ತಲೆಮಾರುಗಳಿಗೆ ಸ್ಫೂರ್ತಿಯಾಗಿರುವ ಅದ್ಭುತ ಚಲನಚಿತ್ರ ಪ್ರಯಾಣಕ್ಕಾಗಿ ಕೇಂದ್ರ ಸರ್ಕಾರ ಹಿರಿಯ ನಟ ಅನಂತ್‌ನಾಗ್ ಅವರಿಗೆ ಪ್ರತಿಷ್ಠಿತ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿ-೨೦೨೪ ಅನ್ನು ಘೋಷಿಸಿದೆ.

ಗುಜರಾತ್‌ನ ಕೆವಾಡಿಯಾದಲ್ಲಿ ಈ ತಿಂಗಳ ೭೨ನೇ ರಾಷ್ಟ್ರೀಯ ಚಲನಚಿತ್ರ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ನೀಡಲಾಗುತ್ತಿದೆ. ಪ್ರಶಸ್ತಿಗೆ ಭಾಜನರಾಗಿರುವ ಅನಂತ್‌ನಾಗ್ ಅವರಿಗೆ ಪ್ರಧಾನಿ ನರೇಂದ್ರ ಮೋದಿ ಅಭಿನಂದನೆ ಸಲ್ಲಿಸಿದ್ದಾರೆ.

ಸಾಮಾಜಿಕ ಜಾಲತಾಣದ ಪೋಸ್ಟ್‌ನಲ್ಲಿ ಅನಂತ್‌ನಾಗ್ ಅವರ ಸಹಜ ಅಭಿನಯ ಬಹುಮುಖ ಪ್ರತಿಭೆ ಮತ್ತು ಚಾತುರ್ಯವು ಭಾರತೀಯ ಚಲನಚಿತ್ರ ರಂಗದ ಮೇಲೆ ದಶಕಗಳ ಕಾಲ ಅಳಿಸಲಾಗದ ಛಾಪು ಮೂಡಿಸಿದೆ ಎಂದು ಬಣ್ಣಿಸಿದ್ದಾರೆ. ಒಬ್ಬ ಅತ್ಯುನ್ನತ ಕಲಾವಿದನಿಗೆ ಇದು ನಿಜಕ್ಕೂ ಅತ್ಯಂತ ಸೂಕ್ತವಾದ ಗೌರವವಾಗಿದೆ ಎಂದು ತಿಳಿಸಿದ್ದಾರೆ. ೨೦೨೫ರಲ್ಲಿ ಅನಂತ್‌ನಾಗ್ ಅವರು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಪದ್ಮಭೂಷಣ ಪ್ರಶಸ್ತಿಯನ್ನು ಸ್ವೀಕರಿಸಿದರು. ಕನ್ನಡ ಚಿತ್ರರಂಗಕ್ಕೆ ನೀಡಿದ ಅದ್ಭುತ ಕೊಡುಗೆಗಾಗಿ ೧೯೯೫ರ ಸಾಲಿನ ದಾದಾ ಸಾಹೇಬ್ ಫಾಲ್ಕೆ ಪ್ರಶಸ್ತಿಯನ್ನು ವರನಟ ಡಾ.ರಾಜಕುಮಾರ್ ಕುಮಾರ್ ಅವರಿಗೆ ನೀಡಿ ಗೌರವಿಸಲಾಗಿತ್ತು. ರಾಜ್‌ಕುಮಾರ್ ಬಳಿಕ ಕನ್ನಡ ಚಿತ್ರರಂಗಕ್ಕೆ ಸಿಕ್ಕ ೨ನೇ ಗೌರವ ಇದಾಗಿದೆ. ಅನಂತ್‌ನಾಗ್ ಅವರು ನಟರಾಗಿ ಕನ್ನಡ, ಹಿಂದಿ, ಮರಾಠಿ, ತೆಲುಗು, ತಮಿಳು, ಮಲೆಯಾಳಂ, ಇಂಗ್ಲೀಷ್ ಭಾಷೆಗಳಲ್ಲಿ ಸ್ಮರಣೀಯ ಪಾತ್ರಗಳಲ್ಲಿ ನಟಿಸಿದ್ದಾರೆ.

---

ರಾಜ್ಯದ ಬರಪೀಡಿತ ತಾಲೂಕುಗಳ ರೈತರ ನೆರವಿಗೆ ಧಾವಿಸಿರುವ ಬ್ಯಾಂಕರ್‌ಗಳ ರಾಜ್ಯಮಟ್ಟದ ಸಮಿತಿ ಕೃಷಿ ಮತ್ತು ಕೃಷಿ ಸಂಬಂಧಿತ ಸಾಲಗಳ ಮರುಪಾವತಿಗೆ ಸಂಬಂಧಿಸಿದಂತೆ ವಿಶೇಷ ಪರಿಹಾರ ಯೋಜನೆ ಪ್ರಕಟಿಸಿದೆ.

ಸಾಲ ಮರುಪಾವತಿಗೆ ೧೨ ತಿಂಗಳ ಕಾಲಾವಕಾಶ ನೀಡುವುದರ ಜೊತೆಗೆ ಒಟ್ಟು ಸಾಲ ಮರುಪಾವತಿಯ ಅವಧಿಯನ್ನು ವಿಸ್ತರಿಸಿ ರೈತರಿಗೆ ನೆರವಾಗಲು ನಿರ್ಧರಿಸಿದೆ.

ರಾಜ್ಯದ ಕಿಸಾನ್ ಕ್ರೆಡಿಟ್ ಕಾರ್ಡ್, ಕೃಷಿ ಸಾಲಗಳು, ಹೈನುಗಾರಿಕೆ, ರೇಷ್ಮೆ ಹಾಗೂ ಮೀನುಗಾರಿಕೆ ಸೇರಿದಂತೆ ಇತರ ಕೃಷಿ ಸಂಬಂಧಿತ ಸಾಲಗಳಿಗೆ ೧೨ ತಿಂಗಳ ಮೊರಟೋರಿಯಂ ನೀಡಲು ನಿರ್ಧರಿಸಿದೆ. ಸಾಧಾರಣ ಬರಪೀಡಿತ ತಾಲೂಕುಗಳಲ್ಲಿ ಸಾಲ ಮರುಪಾವತಿ ಅವಧಿಯನ್ನು ೩೬ ತಿಂಗಳಿಗೆ ಹಾಗೂ ತೀವ್ರ ಬರಪೀಡಿತ ತಾಲೂಕುಗಳಲ್ಲಿ ೬೦ ತಿಂಗಳಿಗೆ ವಿಸ್ತರಿಸಲಾಗಿದೆ.

ಈ ವರ್ಷ ರೈತರಿಂದ ಯಾವುದೇ ರೀತಿಯ ಬಲವಂತದ ಸಾಲ ವಸೂಲಾತಿ ಮಾಡದಂತೆ ಕಟ್ಟುನಿಟ್ಟಿನ ಜೀರೋ ಟಾಲರೆನ್ಸ್ ನೀತಿಯನ್ನು ಜಾರಿಗೆ ತರಲಾಗಿದೆ.

---

ಉಪಮುಖ್ಯಮಂತ್ರಿ ಹಾಗೂ ಕಂದಾಯ ಸಚಿವ ಡಾ.ಜಿ.ಪರಮೇಶ್ವರ್ ವಿಧಾನಸೌಧದಲ್ಲಿಂದು ಜಿಲ್ಲಾಧಿಕಾರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಕಂದಾಯ ಇಲಾಖೆಯ ಪ್ರಗತಿ ಪರಿಶೀಲನಾ ಸಭೆ ನಡೆಸಿದರು.

ಈ ವೇಳೆ ಮಾತನಾಡಿದ ಅವರು, ಭಾರತ್ ಜೊಡೋ ಯುವ ಸಂಘದ ನೋಂದಣಿ ಕಾರ್ಯ ತ್ವರಿತಗೊಳಿಸಬೇಕು ಹಾಗೂ ಪ್ರಜಾಸೇವಾ ಅಭಿಯಾನದಲ್ಲಿ ಬರುವ ಅರ್ಜಿಗಳನ್ನು ತ್ವರಿತ ವಿಲೇವಾರಿ ಮಾಡುವಂತೆ ಸೂಚನೆ ನೀಡಿದ್ದಾರೆ.

ಬಡವರಿಗೆ ನಿವೇಶನ ನೀಡುವ ಕಾರ್ಯಕ್ರಮ ಘೋಷಣೆಯಾದ ಬಳಿಕ ಜನರಿಂದ ಉತ್ತಮ ಪ್ರತಿಕ್ರಿಯೆ ಬರುತ್ತಿದ್ದು, ಈ ಯೋಜನೆಯನ್ನು ಅಧಿಕಾರಿಗಳು ಗಂಭೀರವಾಗಿ ಪರಿಗಣಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

ಕೆಲ ಜಿಲ್ಲೆಗಳಲ್ಲಿ ಭೂಮಿ ಗುರುತಿಸುವ ಕೆಲಸ ಆಗಿಲ್ಲ. ಅಧಿಕಾರಿಗಳು ಭೂಮಿ ಗುರುತಿಸುವ ಪ್ರಕ್ರಿಯೆಯನ್ನು ತಿಂಗಳಾಂತ್ಯದ ವೇಳೆಗೆ ಪೂರ್ಣಗೊಳಿಸಬೇಕು ಎಂದು ತಿಳಿಸಿದ್ದಾರೆ.

---

ರಾಜ್ಯದಲ್ಲಿ ವಿಶೇಷ ಸಮಗ್ರ ಮತದಾರರ ಪಟ್ಟಿ ಪರಿಷ್ಕರಣೆ ಸಂದರ್ಭದಲ್ಲಿ ವಿವಿಧ ಕಾರಣಗಳಿಂದಾಗಿ ಬೇರೆ ಸ್ಥಳಗಳಿಗೆ ಸ್ಥಳಾಂತರಗೊಂಡಿರುವ ಜನರು ಮತದಾರರ ಪಟ್ಟಿಯಿಂದ ಹೊರಗುಳಿಯದಂತೆ ನೋಡಿಕೊಳ್ಳಬೇಕೆಂದು ಉಪಮುಖ್ಯಮಂತ್ರಿ ಡಾ.ಜಿ.ಪರಮೇಶ್ವರ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ರಾಜ್ಯಾದ್ಯಂತ ೪೩ ಲಕ್ಷದ ೮೧ ಸಾವಿರ ಮತದಾರರ ಮ್ಯಾಪಿಂಗ್ ಕಾರ್ಯ ಇನ್ನು ಪೂರ್ಣಗೊಂಡಿಲ್ಲ ಎಂದು ತಿಳಿಸಿದ್ದಾರೆ. ಶಾಶ್ವತ ನಿವಾಸಿ ಪ್ರಮಾಣ ಪತ್ರಗಳನ್ನು ನೀಡುವಲ್ಲಿ ವಿಳಂಬ ಮಾಡಬೇಡಿ, ಅರ್ಜಿ ನಮೂನೆ ೬ರ ಕುರಿತು ಹೆಚ್ಚಿನ ಗಮನ ಹರಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ.

---

ಕೇಂದ್ರ ಗೃಹ ಸಚಿವ ಅಮಿತ್ ಶಾ ಇದೇ ೧೯ ರಂದು ರಾಜ್ಯ ಪ್ರವಾಸ ಕೈಗೊಳ್ಳಲಿದ್ದು, ಹುಬ್ಬಳ್ಳಿಯಲ್ಲಿ ನೂತನ ಖಾಸಗಿ ವೈದ್ಯಕೀಯ ಕಾಲೇಜು ಕಟ್ಟಡ ಹಾಗೂ ೧ ಸಾವಿರದ ೨೦೦ ಹಾಸಿಗೆಗಳ ಆಸ್ಪತ್ರೆಯನ್ನು ಜನಸೇವೆಗೆ ಸಮರ್ಪಿಸಲಿದ್ದಾರೆ. ಈ ಕುರಿತಂತೆ ಹುಬ್ಬಳ್ಳಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಕೆಎಲ್‌ಇ ಅಕಾಡೆಮಿ ಕುಲಪತಿ ಡಾ. ಪ್ರಭಾಕರ ಬಿ. ಕೋರೆ ೭೦೦ ಕೋಟಿ ರೂಪಾಯಿ ವೆಚ್ಚದಲ್ಲಿ ೫೦ ಎಕರೆ ಪ್ರದೇಶದಲ್ಲಿ ವೈದ್ಯಕೀಯ ಮಹಾವಿದ್ಯಾಲಯ ಮತ್ತು ೧ ಸಾವಿರದ ೨೦೦ ಹಾಸಿಗೆಗಳ ಆಸ್ಪತ್ರೆ ನಿರ್ಮಾಣವಾಗಿದೆ ಎಂದು ಮಾಹಿತಿ ನೀಡಿದ್ದಾರೆ. ವಿವಿಧ ಸರ್ಕಾರಿ ಯೋಜನೆಗಳಡಿ ಅರ್ಹ ಫಲಾನುಭವಿಗಳಿಗೂ ಚಿಕಿತ್ಸೆ ದೊರೆಯಲಿದೆ ಎಂದು ತಿಳಿಸಿದ್ದಾರೆ.

---

ಕಾವೇರಿ ನೀರಾವರಿ ನಿಗಮ ವ್ಯಾಪ್ತಿಯ ಯೋಜನೆಗಳು, ಕುಡಿಯುವ ನೀರಿನ ಸಮಸ್ಯೆ ಹಾಗೂ ಮೇಕೆದಾಟು ಯೋಜನೆ ಕುರಿತಂತೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸದೇ ಕಾರ್ಯೋನ್ಮುಖರಾಗಬೇಕು ಎಂದು ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ನಿರ್ದೇಶನ ನೀಡಿದ್ದಾರೆ. ಬೆಂಗಳೂರಿನಲ್ಲಿಂದು ಕಾವೇರಿ ನೀರಾವರಿ ನಿಗಮದ ಪ್ರಗತಿ ಪರಿಶೀಲನಾ ಸಭೆ ನಡೆಸಿ ಮಾತನಾಡಿದ ಅವರು, ಅಧಿಕಾರಿಗಳು ಹವಾನಿಯಂತ್ರಿತ ಕೊಠಡಿಯಲ್ಲಿ ಕುಳಿತು ಲೆಕ್ಕಾಚಾರ ಹಾಕುವ ಬದಲು, ರೈತರ ಸಮಸ್ಯೆಗಳಿಗೆ ಸ್ಪಂದಿಸುವಂತೆ ತಿಳಿಸಿದ್ದಾರೆ. ಕೆಲಸ ಮಾಡದ ಅಧಿಕಾರಿಗಳು ಶಿಸ್ತುಕ್ರಮ ಎದುರಿಸಲು ಸಿದ್ಧರಾಗಬೇಕು ಎಂದು ಎಚ್ಚರಿಕೆ ನೀಡಿದ್ದಾರೆ. ಐದು ವರ್ಷಗಳಲ್ಲಿ ಸುಮಾರು ೧೧೨.೮೮ ಟಿಎಂಸಿ ಹೆಚ್ಚುವರಿ ಕಾವೇರಿ ನೀರು ಸಮುದ್ರ ಪಾಲಾಗಿದೆ. ಇದಕ್ಕೆ ಮೇಕೆದಾಟು ಯೋಜನೆಯೊಂದೇ ಶಾಶ್ವತ ಪರಿಹಾರ ಎಂದು ತಿಳಿಸಿದ್ದಾರೆ.

---

ಸಾರ್ವಜನಿಕರ ಹಿತದೃಷ್ಟಿಯಿಂದ ರಾಜ್ಯ ಸರ್ಕಾರ ಕೇಂದ್ರದಿಂದ ೪ ಸಾವಿರದ ೫೦೦ ಎಲೆಕ್ಟ್ರಾನಿಕ್ ಬಸ್ಸುಗಳನ್ನು ೨೧ ಸಾವಿರ ಕೋಟಿ ವೆಚ್ಚದಲ್ಲಿ ಖರೀದಿ ಮಾಡಿ ಪ್ರಯಾಣಿಕರ ಸಂಚಾರ ವ್ಯವಸ್ಥೆಗೆ ಅನುಕೂಲ ಮಾಡಿದೆ ಎಂದು ಸಾರಿಗೆ ಸಚಿವ ಬಿ.ಎಸ್.ಭೈರತಿ ಸುರೇಶ್ ತಿಳಿಸಿದ್ದಾರೆ.

ತುಮಕೂರಿನಲ್ಲಿ ಕುಣಿಗಲ್-ಬೆಂಗಳೂರು ಮಾರ್ಗವಾಗಿ ನೂತನ ಹವಾ ನಿಯಂತ್ರಿತ ವಜ್ರ ವಿಸ್ತಾರ ಬಸ್ ಸೇವೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

---

ರಾಜ್ಯವು ಜಾಗತಿಕ ಮಟ್ಟದಲ್ಲಿ ಎಲೆಕ್ಟ್ರಾನಿಕ್ಸ್ ಕ್ಷೇತ್ರದ ತಾಣವಾಗಬೇಕು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ.ಪಾಟೀಲ್ ಕರೆ ನೀಡಿದ್ದಾರೆ.

ಬೆಂಗಳೂರಿನಲ್ಲಿಂದು ಕರ್ನಾಟಕ ವಿದ್ಯುನ್ಮಾನ ನಾಯಕತ್ವ ಸಮಾವೇಶದಲ್ಲಿ ಮಾತನಾಡಿದ ಅವರು, ನಮ್ಮಲ್ಲೇ ವಿನ್ಯಾಸ, ಉತ್ಪಾದನೆ, ಪರೀಕ್ಷೆ ಮತ್ತು ರಫ್ತು ವಹಿವಾಟು ಸೇರಿದಂತೆ ಪ್ರತಿಯೊಂದು ಚಟುವಟಿಕೆ ನಡೆಯಬೇಕು ಎಂಬುದು ಸರ್ಕಾರದ ಗುರಿಯಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ. ರಾಜ್ಯದಲ್ಲಿ ೨೦ ಸಾವಿರಕ್ಕೂ ಹೆಚ್ಚು ಚಿಪ್ ವಿನ್ಯಾಸಕಾರರು, ೧೦ ಸಾವಿರಕ್ಕೂ ಹೆಚ್ಚು ಅನಲಾಗ್ ಇಂಜಿನಿಯರ್‌ಗಳು ಇದ್ದು, ಈಗಾಗಲೇ ಹಲವು ದಿಗ್ಗಜ ಕಂಪನಿಗಳು ರಾಜ್ಯದಲ್ಲಿ ನೆಲೆಯೂರಿವೆ.

ದೀರ್ಘಾವಧಿ ಲಾಭವನ್ನು ಪರಿಗಣಿಸಿ ಬೆಂಗಳೂರು, ಮೈಸೂರು ಮತ್ತು ಹುಬ್ಬಳ್ಳಿ ಧಾರವಾಡವನ್ನು ಎಲೆಕ್ಟ್ರಾನಿಕ್ಸ್ ಉದ್ಯಮದ ಕ್ಲಸ್ಟರ್ ಆಗಿ ಪರಿವರ್ತಿಸಲಾಗುತ್ತಿದೆ ಎಂದು ಸಚಿವರು ಸ್ಪಷ್ಟಪಡಿಸಿದ್ದಾರೆ.

---

೨೦೨೫-೨೬ರ ಶೈಕ್ಷಣಿಕ ವರ್ಷದ ಅತ್ಯುತ್ತಮ ಎನ್‌ಡಿಎ ಫಲಿತಾಂಶಕ್ಕಾಗಿ ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಶಾಲೆ ಚೀಫ್ ಆಫ್ ದಿ ಆರ್ಮಿ ಸ್ಟಾಫ್-ಸಿಒಎಎಸ್ ಟ್ರೋಫಿಯನ್ನು ಗೆದ್ದುಕೊಂಡಿದೆ.

ದೆಹಲಿಯ ಮಾಣಿಕ್ ಶಾ ಕೇಂದ್ರದಲ್ಲಿ ನಡೆದ ರಾಷ್ಟ್ರೀಯ ಮಿಲಿಟರಿ ಶಾಲೆಗಳ ವಾರ್ಷಿಕ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಟ್ರೋಫಿ ನೀಡಲಾಗಿದೆ.

---

ಚನ್ನಪಟ್ಟಣ ಆಟಿಕೆಗಳ ಆಧುನೀಕರಣ, ಕುಶಲಕರ್ಮಿಗಳ ಸಬಲೀಕರಣ ಮತ್ತು ಹೊಸ ಮಾರುಕಟ್ಟೆ ಸೃಷ್ಟಿಗೆ ಇಂದು ಚಾಲನೆ ದೊರೆತಿದೆ.

ಈ ಮೂಲಕ ಚನ್ನಪಟ್ಟಣ ಆಟಿಕೆ ೨.೦ ಮೂಲಕ ಜಾಗತಿಕ ಮಾರುಕಟ್ಟೆಯತ್ತ ಹೆಜ್ಜೆ ಇಟ್ಟಿದೆ. ರಾಮನಗರದ ಸರ್ಕಾರಿ ಇಂಜಿನಿಯರಿಂಗ್ ಕಾಲೇಜಿನಲ್ಲಿ ಇಂದು ಆಟಿಕೆಗಳ ಪರಂಪರೆಯನ್ನು ಆಧುನೀಕ ತಂತ್ರಜ್ಞಾನ, ನವೀನತೆ,

ಉದ್ಯಮಶೀಲತೆ ಮತ್ತು ಜಾಗತಿಕ ಮಾರುಕಟ್ಟೆಯೊಂದಿಗೆ ಸಂಯೋಜಿಸಿ ಹೊಸ ಅವಕಾಶಗಳನ್ನು ಸೃಷ್ಟಿಸುವ ಕುರಿತಂತೆ ಚರ್ಚಿಸಲಾಗಿದೆ.

---

ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ಸಮಸ್ಯೆ ನಿವಾರಣೆಗೆ ಗ್ರಾಮ ಪಂಚಾಯಿತಿಗಳಿಗೆ ಲಭ್ಯವಿರುವ ಅನುದಾನವನ್ನು ಸಂಪೂರ್ಣವಾಗಿ ಬಳಸಿಕೊಂಡು ಅಗತ್ಯ ಸೌಲಭ್ಯ ಕಲ್ಪಿಸಬೇಕು ಎಂದು ಬೆಂಗಳೂರು ನಗರ ಉಸ್ತುವಾರಿ ಸಚಿವ ಕೃಷ್ಣ ಬೈರೇಗೌಡ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಕೆ.ಡಿ.ಪಿ. ಪ್ರಗತಿ ಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಕುಡಿಯುವ ನೀರಿಗೆ ಶಾಶ್ವತ ಪರಿಹಾರ ಕಲ್ಪಿಸಲು ಆದ್ಯತೆ ನೀಡಬೇಕು. ಹಲವು ವರ್ಷಗಳಿಂದ ನಿಷ್ಕ್ರಿಯೆಗೊಂಡಿರುವ ಸಾವಿರಕ್ಕೂ ಹೆಚ್ಚು ಕೊಳವೆ ಬಾವಿಗಳ ಆರ್‌ಆರ್ ಸಂಖ್ಯೆಯನ್ನು ಹೊಸ ಸಂಪರ್ಕಗಳಿಗೆ ವರ್ಗಾಯಿಸುವಂತೆ ತಿಳಿಸಿದ್ದಾರೆ.

---

ಆಕಾಶವಾಣಿ ಬೆಂಗಳೂರು ಕೇಂದ್ರದಲ್ಲಿ ಇಂದು ಹಿಂದಿ ಪಾಕ್ಷಿಕ ನಡೆಯಿತು. ಉಪ ಮಹಾನಿರ್ದೇಶಕ ಪಿ.ಸಂಜೀವ್ ಕಾರ್ಯಕ್ರಮ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಸುದ್ದಿ ಹಾಗೂ ಕಾರ್ಯಕ್ರಮ ವಿಭಾಗದ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

ಹಿಂದಿ ಪಾಕ್ಷಿಕ ಆಚರಣೆ ಹಿನ್ನೆಲೆಯಲ್ಲಿ ಇದೇ ತಿಂಗಳ ೩೦ರವರೆಗೆ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

__________ ಮುಕ್ತಾಯ __________